# ಶೇ.100 ಕ್ಯಾಂಪಸ್ ನಿಯೋಜನೆ

ಬೆಂಗಳೂರು: ಸಾಂಕ್ರಾಮಿಕ ರೋಗ ಕೊರೋನಾ ಔದ್ಯೋಗಿಕ ಮಾರುಕಟ್ಟೆಯಲ್ಲಿಯು ಕುಸಿತ ಸೇರಿದಂತೆ ಅನೇಕ ಆತಂಕಗಳನ್ನು ಹುಟ್ಟುಹಾಕಿದೆ. ಆದರೆ ಸಿಎಂಆರ್ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳ ವಿಷಯಕ್ಕೆ ಬಂದರೆ, ನೇಮಕಾತಿಯ ಮೇಲೆ ಯಾವುದೇ ಪರಿಣಾಮ ಬೀರಿಲ್ಲ. ವಿಶ್ವವಿದ್ಯಾನಿಲಯವು ಇಂತಹ ಸಂಕಷ್ಟದ ಸಂದರ್ಭದಲ್ಲೂ ತನ್ನ ವಿದ್ಯಾರ್ಥಿಗಳನ್ನು ಭಾರತದ ಉನ್ನತ ಕಂಪನಿಗಳಲ್ಲಿ ನೇಮಕ ಮಾಡಿಸಿದೆ. 120 ಉನ್ನತ ಸಂಸ್ಥೆಗಳು ತಮ್ಮ ವರ್ಚುವಲ್ ಮೋಡ್ ಮೂಲಕ ಸಿಎಂಆರ್ ವಿಶ್ವವಿದ್ಯಾಲಯದಿಂದ ದೊಡ್ಡ ಸಂಖ್ಯೆಯ ವಿದ್ಯಾರ್ಥಿಗಳನ್ನು ನೇಮಿಸಿಕೊಂಡಿವೆ. ಕೌಶಲದೊಂದಿಗೆ ಶಿಕ್ಷಣವನ್ನು ನೀಡುವುದು ಸಿಎಂಆರ್ ವಿವಿ ವಿದ್ಯಾರ್ಥಿಗಳಿಗೆ ಪ್ಲಸ್ ಪಾಯಿಂಟ್ ಆಗಿದೆ. ವಿಶ್ವವಿದ್ಯಾಲಯವು ತನ್ನ ಎಂಬಿಎ ಮತ್ತು ಇತರ ವಿದ್ಯಾರ್ಥಿಗಳಿಗೆ ಉದ್ಯಮ ಆಧಾರಿತ ಶಿಕ್ಷಣ ಒದಗಿಸುತ್ತಿದೆ ಎಂದು ಪ್ರಕಟಣೆ ತಿಳಿಸಿದೆ.